

ಕಾಂಚನ ಕ್ರೆಡಿಟ್ ಸೌಹಾರ್ದ ಸಹಕಾರಿ ನಿ., ಮಂಗಳೂರು

5. ಪ್ರಣವ ಸೌಹಾರ್ದ ಸಹಕಾರಿ ನಿ., ಮಂಗಳೂರು ಇದು ಸಹ ಇತ್ತೀಚಿಗೆ ಪ್ರಾರಂಭವಾಗಿ ವಿಭಿನ್ನವಾಗಿ ಕಾರ್ಯನಿರ್ವಹಿಸುತ್ತಿರುವ ಸಹಕಾರಿ ಸಂಸ್ಥೆಯಾಗಿದೆ. ಸಾವಯವ, ಸ್ವ-ಉದ್ಯೋಗ, ಸಣ್ಣ ಮತ್ತು ಕಿರು ಕೈಗಾರಿಕೆಗಳಿಗೆ ಪ್ರೋತ್ಸಾಹ, ಸೋಲಾರ್, ಕಾಲೇಜುಗಳಲ್ಲಿ ಮೆಡಿಕಲ್ ಕ್ಯಾಂಪ್ ಏರ್ಪಡಿಸುವುದು, ಕಾರ್ಯಾಗಾರಗಳನ್ನು ಏರ್ಪಡಿಸುವುದು ಹೀಗೆ ವಿವಿಧ ಕ್ರಿಯಾಶೀಲ ಚಟುವಟಿಕೆಗಳನ್ನು ಮಾಡುತ್ತಿರುವ ಈ ಸಹಕಾರಿಯು ಅಧ್ಯಕ್ಷರಾದ ಶ್ರೀ ಜಿ.ಆರ್.ಪ್ರಸಾದರವರ ನೇತೃತ್ವದಲ್ಲಿ ಉತ್ತಮ ಪ್ರಗತಿಯತ್ತ ದಾಪುಗಾಲು ಹಾಕುತ್ತಿದೆ. 2300 ಸದಸ್ಯರನ್ನು ಹೊಂದಿದೆ. ರೂ.3.54 ಕೋಟಿಗಳ ಠೇವಣಿ ಇದೆ. ರೂ.3.67 ಕೋಟಿಗಳ ಸಾಲ ನೀಡಿದ್ದಾರೆ. ಪ್ರಸಕ್ತ ಸಾಲಿನಲ್ಲಿ ರೂ.4.79 ಸಾವಿರ ಲಾಭ ಗಳಿಸಿದೆ. ಸಂಯುಕ್ತ ಸಹಕಾರಿಯ ಅಧ್ಯಕ್ಷರಾದ ಶ್ರೀ ಬಿ.ಹೆಚ್. ಕೃಷ್ಣಾರೆಡ್ಡಿಯವರು ಮಾತನಾಡಿ ಸಹಕಾರಿಯ ಯಾವುದೇ ಸಮಸ್ಯೆಗಳು ಗಮನಕ್ಕೆ ತರಬಹುದು. ಪ್ರಜ್ಞಾವಂತ ಹಾಗೂ ಅನುಭವಿ ನಿರ್ದೇಶಕರು ಹಾಗೂ ದಕ್ಷ ಸಿಬ್ಬಂದಿಯವರು ಅಧ್ಯಕ್ಷರ ಹಾಗೂ ಸದಸ್ಯರ ಆಶಯಗಳಿಗೆ ಪೂರಕವಾಗಿ ಕಾರ್ಯನಿರ್ವಹಿಸುತ್ತಿರುವುದು ಸೌಹಾರ್ದ ಸಹಕಾರಿಗಳು ಹಾಗೂ ಸಂಯುಕ್ತ ಸಹಕಾರಿಗೆ ಹೆಮ್ಮೆಯ ವಿಷಯ ಎಂದು ತಿಳಿಸಿದರು.



ಪ್ರಣವ ಸೌಹಾರ್ದ ಸಹಕಾರಿ ನಿ., ಮಂಗಳೂರು

- ದಿನಾಂಕ 18 ಮೇ 2018ರಂದು ಸಂಯುಕ್ತ ಸಹಕಾರಿಯ ಅಧ್ಯಕ್ಷರಾದ ಶ್ರೀ ಬಿ.ಹೆಚ್.ಕೃಷ್ಣಾರೆಡ್ಡಿ ಹಾಗೂ ನಿರ್ದೇಶಕರಾದ ಶ್ರೀ ಬಿ.ಗಂಗಾಧರಯ್ಯ, ಶ್ರೀ ಬಿ.ಎಸ್.ಗುಂಡುರಾವ್ ಹಾಗೂ ಶ್ರೀ ಎ.ಆರ್.ಪ್ರಸನ್ನಕುಮಾರ್ ಇವರು ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ನಗರದಲ್ಲಿನ ಶ್ರೀ ರಾಮೇಶ್ವರ ಬಹು ಉದೇಶಿತ ಸೌಹಾರ್ದ ಸಹಕಾರಿ ನಿ., ತೀರ್ಥಹಳ್ಳಿ, ಕವಲೇದುರ್ಗ ಬಹು ಉದ್ದೇಶಿ ಸೌಹಾರ್ದ ಸಹಕಾರಿ ನಿ., ತೀರ್ಥಹಳ್ಳಿ, ಹೇಮಾದ್ರಿ ವಿವಿದೋದ್ದೇಶ ಸೌಹಾರ್ದ ಸಹಕಾರಿ ನಿ., ತೀರ್ಥಹಳ್ಳಿ, ಸಮ್ಮಿಲನ ಕೃಷಿ ಸಂಸ್ಕರಣ ಸೌಹಾರ್ದ ಸಹಕಾರಿ ನಿ., ಕೋಟೆಗದ್ದೆ, ಸುವಿಧಾ ವಿವಿದೋದ್ದೇಶ ಸೌಹಾರ್ದ ಸಹಕಾರಿ ನಿ., ಸಾಗರ ಈ ಸಹಕಾರಿಗಳಿಗೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಅಧ್ಯಕ್ಷರು ಹಾಗೂ ನಿರ್ದೇಶಕರನ್ನು ಸಹಕಾರಿಯ ಆಡಳಿತ ಮಂಡಲಿಯ ವತಿಯಿಂದ ಆತ್ಮೀಯ ಸ್ವಾಗತ ಕೋರಿದರು. ಸಹಕಾರಿಯ ಕಾರ್ಯಚಟುವಟಿಕೆಗಳ ಕುರಿತು ಮಾಹಿತಿ ಪಡೆದರು. ಭೇಟಿಯ ಸಂದರ್ಭದಲ್ಲಿ ಸಹಕಾರಿಯ ಅಧ್ಯಕ್ಷರು, ಆಡಳಿತ ಮಂಡಲಿಯ ಸದಸ್ಯರು, ಮುಖ್ಯಕಾರ್ಯನಿರ್ವಾಹಕರು ಹಾಜರಿದ್ದರು.
- ಶ್ರೀ ಮಂಜುನಾಥೇಶ್ವರ ಸೌಹಾರ್ದ ಸಹಕಾರಿ ನಿ., ಹಾಸನ ಮತ್ತು ಮೈಸೂರು ಹಾಗೂ ಚಾಮರಾಜನಗರ ಜಿಲ್ಲಾ ವಾಹನ ಮಾಲೀಕರ ಸೌಹಾರ್ದ ಸಹಕಾರಿ ನಿ., ಮೈಸೂರು ಸಹಕಾರಿಗಳಿಗೆ ಮೈಸೂರು ವಿಭಾಗೀಯ ಅಧಿಕಾರಿಯಾದ ಶ್ರೀ ವೈ.ಕುಮಾರ್‌ರವರು ಭೇಟಿ ನೀಡಿ, ಸಹಕಾರಿಯ ಕಾರ್ಯಚಟುವಟಿಕೆಗಳ ಕುರಿತು ಚರ್ಚಿಸಿದರು.